# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-161/2022-23

ದಿನಾಂಕ : 21/05/2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :21-05-2022 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :21-05-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಕೀರ್ತಿ.ಹೆಚ್.ಆರ್ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ. ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹೊಸಕೆರೆಹಳ್ಳಿ ರೆಫರಲ್ ಆಸ್ಪತ್ರೆಯಲ್ಲಿ ಪ್ರಾರಂಭಿಸಲು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.
2) ಆಂಜನೇಯನಗರ ರಸ್ತೆ ಪಕ್ಕದಲ್ಲಿ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ಸೂಚಿಸಲಾಗಿರುತ್ತದೆ.
3) ಆಂಜನೇಯನಗರದ ಬೀದಿ ದೀಪಗಳನ್ನು ಸರಿಪಡಿಸುವಂತೆ ಸಭೆಯಲ್ಲಿ ಮನವಿ ಮಾಡಿರುತ್ತಾರೆ.
4) ವಾರ್ಡ್-161 ರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು, ಅವುಗಳನ್ನು ನಿಯಂತ್ರಣ ಮಾಡುವಂತೆ ಸಭೆಗೆ ತಿಳಿಸಿದಾಗ ಮಾನ್ಯ ಅಧ್ಯಕ್ಷರು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸುವುದಾಗಿ ಸಭೆಗೆ ತಿಳಿಸಿದರು.
5) ಬೀಡಾಡಿ ವಾಹನಗಳನ್ನು ವಾರ್ಡ್ ಪ್ರದೇಶದಲ್ಲಿ ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿರುತ್ತಾರೆ.
6) ವಾರ್ಡ್-161 ರಲ್ಲಿ ಪ್ರಸ್ತುತ ಸಾಲಿನಲ್ಲಿ ಎಷ್ಟು ಕಂದಾಯ ವಸೂಲಿ ಮಾಡಿರುವುದನ್ನು ಸಭೆಗೆ ತಿಳಿಸುವಂತೆ ಮಾನ್ಯ ಅಧ್ಯಕ್ಷರು ಕಂದಾಯ ಇಲಾಖೆಯ ಅಧಿಕಾರಿಗಳನ್ನು ಕೋರಿದರು.
7) ವಾರ್ಡ್ ಪ್ರದೇಶದಲ್ಲಿ ರಾತ್ರಿ ವೇಳೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪೋಲೀಸ್ ದಸ್ತು ತಿರುಗಲು ಸಾರ್ವಜನಿಕರು ಸಭೆಗೆ ತಿಳಿಸಿದಾಗ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.
8) ವಾರ್ಡ್ ಪ್ರದೇಶದಲ್ಲಿ ಬೆಸ್ಕಾಂ ಇಲಾಖೆಯಿಂದ ಕೇಬಲ್ ಅಳವಡಿಸಲು ರಸ್ತೆ ಗುಂಡಿಗಳನ್ನು ಮಾಡಿದ್ದು, ಅವುಗಳನ್ನು ಕೂಡಲೇ ಮುಚ್ಚುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Keerthi H.R

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 161 ರ ನೋಡಲ್ ಅಧಿಕಾರಿ. 21/05/2022